RNU AIR DHARWAD

# NOVEMBER 5, 2025
# ALL INDIA RADIO- DHARWAD
# PRADESH SAMACHARA (KANNADA) 7:05 AM

## ಮುಖ್ಯಾಂಶಗಳು

- **ಕಬ್ಬು ಬೆಲೆನಿಗದಿಗೆ ಆಗ್ರಹಿಸಿ** ರಾಜ್ಯದ ವಿವಿಧೆಡೆ ಮುಂದುವರಿದ ರೈತರ ಪ್ರತಿಭಟನೆ: ಸಮಸ್ಯೆ ನಿವಾರಣೆಗೆ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳಿಗೆ ಸೂಚನೆ.

- **ರೈತರ ಸಮಸ್ಯೆಗಳನ್ನು ಬಗೆಹರಿಸುವಲ್ಲಿ** ರಾಜ್ಯ ಸರ್ಕಾರ ಸಂಪೂರ್ಣ ವಿಫಲ–ವಿಧಾನ ಪರಿಷತ್ ವಿಪಕ್ಷ ನಾಯಕರ ಆರೋಪ.

- **ಚಿತ್ರದುರ್ಗ ಜಿಲ್ಲೆಯ** ಹಿರಿಯೂರು ಸ್ಥಾವರ ಅಭಿವೃದ್ಧಿಗೆ ಕಿರ್ಲೋಸ್ಕರ್ ಫೆರಸ್ ಇಂಡಸ್ಟ್ರೀಸ್‌ನಿಂದ 3 ಸಾವಿರ ಕೋಟಿ ರೂಪಾಯಿ ಹೂಡಿಕೆ.

- **ಸರ್ಕಾರದ ಮಹತ್ವಾಕಾಂಕ್ಷಿ** ಇ–ಸ್ವತ್ತು ಯೋಜನೆ: ಸಮರ್ಪಕ ಜಾರಿಗೆ ಜಿಲ್ಲಾ ಪಂಚಾಯತಿ ಸಿಇಓಗಳಿಗೆ ಸೂಚನೆ.

## ಈಗ ವಾರ್ತೆಗಳ ವಿವರ

*******

**ಪ್ರತಿಟನ್ ಕಬ್ಬಿಗೆ 3500 ರೂಪಾಯಿ** ಬೆಲೆ ನೀಡಬೇಕು ಎಂದು ಆಗ್ರಹಿಸಿ ಕಳೆದ ಒಂದು ವಾರದಿಂದ ಬೆಳಗಾವಿ ಜಿಲ್ಲೆಯ ಕಬ್ಬು ಬೆಳೆಗಾರರು ನಡೆಸುತ್ತಿರುವ ಹೋರಾಟ ಮುಂದುವರಿದಿದೆ. ಸಕ್ಕರೆ ಕಾರ್ಖಾನೆಗಳು ರೈತರ ಬೇಡಿಕೆಗೆ ಸ್ಪಂದಿಸದ ಕಾರಣ, ರಾಯಬಾಗ, ಗೋಕಾಕ, ಮೂಡಲಗಿ, ಅಥಣಿ, ಹುಕ್ಕೇರಿ, ಚಿಕ್ಕೋಡಿ ಭಾಗದಲ್ಲಿ ರೈತರು ಬೀದಿಗಿಳಿದು ಪ್ರತಿಭಟನೆ ನಡೆಸುತ್ತಿದ್ದಾರೆ. ಈ ಮಧ್ಯ ಅಥಣಿ ಹಾಗೂ ಹುಕ್ಕೇರಿಯಲ್ಲಿ ನಿನ್ನೆ ಕರೆ ನೀಡಿದ್ದ ಬಂದ್ ಹಿನ್ನೆಲೆ, ವ್ಯಾಪಾರಸ್ಥರು ತಮ್ಮ ಅಂಗಡಿ ಮುಂಗಟ್ಟುಗಳನ್ನು ಬಂದ್ ಮಾಡಿ ಬೆಂಬಲ ವ್ಯಕ್ತಪಡಿಸಿದರು. ಕಬ್ಬು ಬೆಳೆಗಾರರ ಸಮಸ್ಯೆ ನಿವಾರಣೆಗೆ ಕ್ರಮ ಕೈಗೊಳ್ಳಲು ಜಿಲ್ಲಾಧಿಕಾರಿಗೆ ಸೂಚಿಸಲಾಗಿದೆ ಎಂದು ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ, ತಿಳಿಸಿದ್ದಾರೆ.

*******

**ಕಬ್ಬು ಬೆಲೆನಿಗದಿಗೆ ಆಗ್ರಹಿಸಿ** ರಾಜ್ಯದ ವಿವಿಧೆಡೆ ನಡೆದಿರುವ ರೈತರ ಹೋರಾಟವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ ಎಂದು ಸಕ್ಕರೆ ಖಾತೆ ಸಚಿವ ಶಿವಾನಂದ ಪಾಟೀಲ ಹೇಳಿದ್ದಾರೆ. ವಿಜಯಪುರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಬ್ಬಿಗೆ ನ್ಯಾಯಸಮ್ಮತ ದರ ನೀಡುವ ವಿ ’ಯದಲ್ಲಿ ಕೇಂದ್ರ ಸರ್ಕಾರವೇ ಅಂತಿಮ

ನಿರ್ಧಾರ ಕೈಗೊಳ್ಳುತ್ತದೆ. ರೈತರ ಹಿತದೃಷ್ಟಿಯಿಂದ ಕೇಂದ್ರದಿಂದ ನಿಗದಿತ ದರ ದೊರಕಿಸಲು ರಾಜ್ಯ ಸರ್ಕಾರ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದೆ ಎಂದರು. ರೈತರ ಹಿತ ಕಾಪಾಡುವುದು ಸರ್ಕಾರದ ಕರ್ತವ್ಯ. ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಸಮಸ್ಯೆ ಬಗೆಹರಿಸುವ ಕಾರ್ಯ ನಡೆಯುತ್ತಿದೆ ಎಂದು ಸಚಿವರು ಹೇಳಿದರು.

*******

**ರೈತರ ಸಮಸ್ಯೆಗಳನ್ನು ಬಗೆಹರಿಸುವಲ್ಲಿ** ರಾಜ್ಯ ಸರ್ಕಾರ ಸಂಪೂರ್ಣ ವಿಫಲವಾಗಿದೆ ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ ಒಂದು ವರ್ಷಕ್ಕಿಂತ ಅಧಿಕ ಸಮಯದಿಂದ, ಅಧಿಕಾರ ಹಂಚಿಕೆ, ಸಚಿವ ಸಂಪುಟ ಪುನರ್‌ರಚನೆ ವಿಷಯದಲ್ಲೇ ಮುಖ್ಯಮಂತ್ರಿ ಸೇರಿದಂತೆ ಸಚಿವ ಸಂಪುಟದ ಸಹೋದ್ಯೋಗಿಗಳು ತಲ್ಲೀನರಾಗುವ ಮೂಲಕ ಅಭಿವೃದ್ಧಿಯನ್ನು ಕಡೆಗಣಿಸಿದ್ದಾರೆ. ರಾಜ್ಯದಲ್ಲಿ ಅತಿವೃಷ್ಟಿ ಮತ್ತು ಅನಾವೃಷ್ಟಿಯಿಂದ ರೈತರು ಸಮಸ್ಯೆಗೆ ಸಿಲುಕಿದ್ದು, ಅವರ ನೆರವಿಗೆ ಧಾವಿಸುವಲ್ಲಿ ಸರ್ಕಾರ ವಿಫಲವಾಗಿದೆ ಎಂದು ಹೇಳಿದರು. ಉತ್ತರ ಕರ್ನಾಟಕ ಭಾಗದಲ್ಲಿ ಮಳೆಯಿಂದ ಅಪಾರ ಪ್ರಮಾಣದ ಹಾನಿಯಾಗಿದೆ. ಹೀಗಿದ್ದರೂ ರೈತರಿಗೆ ಪರಿಹಾರ ನೀಡಿಲ್ಲ. ಇದೀಗ ಕಬ್ಬು ಬೆಳೆಗಾರರು ಬೆಳಗಾವಿ ಸೇರಿದಂತೆ ವಿವಿಧ ಜಿಲ್ಲೆಗಳಲ್ಲಿ ಪ್ರತಿಭಟನೆ ನಡೆಸುತ್ತಿದ್ದಾರೆ. ರಾಜ್ಯ ಸರ್ಕಾರ ತಕ್ಷಣ ಕಬ್ಬು ಬೆಳೆಗಾರರ ನೆರವಿಗೆ ಧಾವಿಸಬೇಕು ಎಂದು ನಾರಾಯಣಸ್ವಾಮಿ ಆಗ್ರಹಿಸಿದರು.

*******

**ಮಂಡ್ಯ ಜಿಲ್ಲೆಯ ಕಬ್ಬು ಬೆಳೆಗಾರರ** ಬಾಕಿ ಹಣವನ್ನು ಸಕ್ಕರೆ ಕಾರ್ಖಾನೆಗಳು ಯಾವುದೇ ವಿಳಂಬ ಮಾಡದೆ ಶೀಘ್ರವಾಗಿ ಪಾವತಿ ಮಾಡಬೇಕು. ಇಲ್ಲವಾದಲ್ಲಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಹೇಳಿದ್ದಾರೆ.

ಜಿಲ್ಲಾಧಿಕಾರಿ ಕಚೇರಿಯಲ್ಲಿ ಜಿಲ್ಲೆಯ ರೈತರ ಸಮಸ್ಯೆಗಳನ್ನು ಚರ್ಚಿಸಲು ಆಯೋಜಿಸಲಾಗಿದ್ದ ಸಭೆಯಲ್ಲಿ ಮಾತನಾಡಿದ ಅವರು, ಮೈ ಁಗರ್ ಕಾರ್ಖಾನೆಯ ಬಾಯ್ಲರ್ ಹೌಸ್ ನಿರ್ಮಾಣದ ಕುರಿತು ವಿಸ್ತೃತ ಯೋಜನಾ ವರದಿ ಸಲ್ಲಿಸಲಾಗಿದೆ. ಶೀಘ್ರ ಬಾಯ್ಲರ್ ಸ್ಥಾಪನೆ ಮಾಡಲಾಗುವುದು ಎಂದರು.

*******

**ಚಿತ್ರದುರ್ಗ ಜಿಲ್ಲೆಯ** ಹಿರಿಯೂರು ಸ್ಥಾವರವನ್ನು ಅಭಿವೃದ್ಧಿಪಡಿಸಲು ಕಿರ್ಲೋಸ್ಕರ್ ಫೆರಸ್ ಇಂಡಸ್ಟ್ರಿಸ್ ಮುಂದಿನ 3 ವ ರ್ಗಗಳಲ್ಲಿ, 3 ಸಾವಿರ ಕೋಟಿ ರೂಪಾಯಿ ಹೂಡಿಕೆ ಮಾಡಲಿದೆ ಎಂದು ಕೈಗಾರಿಕಾ ಖಾತೆ ಸಚಿವ ಎಂ.ಬಿ.ಪಾಟೀಲ ತಿಳಿಸಿದ್ದಾರೆ. ಈ ಕುರಿತು ಎಕ್ಸ್ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಉಕ್ಕು ತಯಾರಿಕೆ ವಿಸ್ತರಣೆ, ಕಬ್ಬಿಣದ ಅದಿರು ಸಂಸ್ಕರಣೆ ಹೆಚ್ಚಿಸಲು ಮತ್ತು ಸ್ಪಾಂಜ್ ಪೈಪ್ ಉತ್ಪಾದನೆ ಸೇರಿದಂತೆ ಉದ್ಯಮ ವಿಸ್ತರಣೆಯ ಗುರಿ ಇರಿಸಿಕೊಂಡು ಹೂಡಿಕೆ ಮಾಡಲಿದೆ ಎಂದಿದ್ದಾರೆ. ಕಳೆದ ಎರಡು ದಶಕಗಳಿಂದ ಸಂಸ್ಥೆ ತನ್ನ ಲಾಭದ ಶೇಕಡ 2ರ ಷ್ಟ ಅಂಶವನ್ನು ಸಿ.ಎಸ್.ಆರ್. ಚಟುವಟಿಕೆಗಳಿಗೆ ಮೀಸಲಿಟ್ಟಿದ್ದು, ಮುಂದಿನ ದಿನಗಳಲ್ಲಿ ಗ್ರಾಮೀಣ ಆರೋಗ್ಯ ಮತ್ತು ಜನಕಲ್ಯಾಣದ ಕ್ಷೇತ್ರದಲ್ಲಿ ಹೆಚ್ಚಿನ ಒತ್ತು ನೀಡಲಿರುವುದು ಶ್ಲಾಘನೀಯ ಎಂದು ಹೇಳಿದ್ದಾರೆ.

*******

**ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿನ** ಸುಮಾರು ಒಂದು ಕೋಟಿ ಆಸ್ತಿಗಳನ್ನು ಇ–ಸ್ವತ್ತು ತೆಕ್ಕೆಗೆ ತರುವ ಮೂಲಕ ಮನೆ ಹಾಗೂ ನಿವೇಶನಗಳನ್ನು ಸಕ್ರಮಗೊಳಿಸುವ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯನ್ನು ಸಮರ್ಪಕವಾಗಿ ಜಾರಿಗೊಳಿಸಲು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಖಾತೆ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮ ಖಾತೆ ಮೂಲಕ ಈ

ಮಾಹಿತಿ ನೀಡಿರುವ ಅವರು, ರಾಜ್ಯದ ಲಕ್ಷಾಂತರ ಮಂದಿ ಈ ಯೋಜನೆಯ ಪ್ರಯೋಜನ ಪಡೆಯಲು ತವಕದಿಂದ ಕಾಯುತ್ತಿದ್ದು, ಸಾರ್ವಜನಿಕರಿಗೆ ಸುಗಮ ಹಾಗೂ ಪಾರದರ್ಶಕವಾಗಿ ಇ-ಸ್ವತ್ತು ಪ್ರಯೋಜನ ದೊರೆಯುವಂತೆ ಸಿಬ್ಬಂದಿಯನ್ನು ಸಜ್ಜು ಮಾಡಬೇಕು. ಜಿಲ್ಲಾ ಉಸ್ತುವಾರಿ ಸಚಿವರು, ಸ್ಥಳೀಯ ಜನಪ್ರತಿನಿಧಿಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು, ಇ–ಸ್ವತ್ತು ಆಂದೋಲನವನ್ನು ಯಶಸ್ವಿಗೊಳಿಸುವಂತೆ ನಿರ್ದೇಶನ ನೀಡಲಾಗಿದೆ ಎಂದು ಅವರು ತಿಳಿಸಿದ್ದಾರೆ.

*******

**ಇದೇ 9 ರಂದು ಶ್ರವಣಬೆಳಗೊಳಕ್ಕೆ** ಉಪ ರಾಷ್ಟ್ರಪತಿ ಸಿ.ಪಿ ರಾಧಾಕೃಷ್ಣನ್ ಅವರು ಆಗಮಿಸುತ್ತಿರುವ ಹಿನ್ನೆಲೆ, ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ಹಾಸನ ಜಿಲ್ಲಾಧಿಕಾರಿ ಲತಾಕುಮಾರಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಶ್ರವಣಬೆಳಗೊಳದಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು ಯಾವುದೇ ಲೋಪಕ್ಕೆ ಅವಕಾಶ ನೀಡದಂತೆ ಅಧಿಕಾರಿಗಳು ಸಮನ್ವಯತೆಯಿಂದ ಕರ್ತವ್ಯ ನಿರ್ವಹಿಸಬೇಕು. ಗಣ್ಯರ ಆಗಮನದ ಹಿನ್ನೆಲೆಯಲ್ಲಿ ಪ್ರತಿಯೊಬ್ಬರು ತಮ್ಮ ತಮ್ಮ ಜವಾಬ್ದಾರಿಯನ್ನು ಎಚ್ಚರಿಕೆಯಿಂದ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಸೂಚನೆ ನೀಡಿದರು.

*******

**ಈಗ ಪ್ರಕಟಣೆ ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..**

**ಪ್ರಕಟಣೆ–58 ಸೆಕೆಂಡ್ಸ್**

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**

*******

**ಇಂದು** ಸಿಖ್ಖ ಪಂಥದ ಧರ್ಮಗುರು, ಗುರು ನಾನಕ ದೇವರ ಜಯಂತಿ. ಸತ್ಯ, ನ್ಯಾಯ, ಕರುಣೆ ಮಾರ್ಗಗಳಮೂಲಕ ಜೀವನದಲ್ಲಿ ಯಶಸ್ಸನ್ನು ಕಾಣಬಹುದು ಎಂದು ತಿಳಿಸಿಕೊಟ್ಟ ಗುರುವಿಗೆ ಹಲವು ವಿಧಾಯಕ ಕಾರ್ಯಕ್ರಮಗಳ ಮೂಲಕ ಗೌರವ ನಮನ. 1469 ರಲ್ಲಿ ಜನಿಸಿದ ಗುರು ನಾನಕ ದೇವರ ಬೋಧನೆಗಳು, ಸಿಖ್ಖರ ಪವಿತ್ರ ಗ್ರಂಥ, 'ಗುರು ಗ್ರಂಥ ಸಾಹಿಬ್' ಮೂಲಕ ಜಗತ್ತಿಗೆ ಪ್ರೇರಣೆಯಾಗಿವೆ. ಜಯಂತಿ ಹಿನ್ನೆಲೆ ದೇಶದ ವಿವಿಧೆಡೆ, ಗುರುದ್ವಾರಗಳಲ್ಲಿ ವಿಶೇಷ ಪ್ರಾರ್ಥನೆ ಹಾಗೂ ಔತಣ–ಲಂಗರ್ ಆಯೋಜಿಸಲಾಗಿದೆ.

*******

**ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ** ಕಾರ್ಯಕ್ರಮದಡಿ, ಹಾವೇರಿ ಜಿಲ್ಲೆಯಲ್ಲಿ ಕುಷ್ಠರೋಗ ಪ್ರಕರಣ ಪತ್ತೆ ಹಚ್ಚುವ ಅಭಿಯಾನ ಜಾರಿಯಲ್ಲಿದ್ದು, ಇದೇ 19 ರವರೆಗೆ ನಡೆಯಲಿದೆ. ಈ ಕಾರ್ಯಕ್ಕೆ ಜಿಲ್ಲೆಯಲ್ಲಿ ಒಟ್ಟು 316 ತಂಡಗಳನ್ನು ರಚಿಸಲಾಗಿದ್ದು, 68 ಆರೋಗ್ಯ ಮೇಲ್ವಿಚಾರಕರು ಕಾರ್ಯನಿರ್ವಹಿಸುತ್ತಿದ್ದಾರೆ. ಈ ಕುರಿತು ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ಚನ್ನಬಸಯ್ಯ ವಿರಕ್ತಮಠ ಅವರು.

**ಧ್ವನಿ–ಡಾ.ಚನ್ನಬಸಯ್ಯ ವಿರಕ್ತಮಠ–49 ಸೆಕೆಂಡ್ಸ್**

*******

**ಬೆಂಬಲ ಬೆಲೆ ಯೋಜನೆಯಡಿ,** ವಿಜಯನಗರ ಜಿಲ್ಲೆಯಲ್ಲಿ ಶೇಂಗಾ ಮತ್ತು ಸೂರ್ಯಕಾಂತಿ ಖರೀದಿ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ ಎಂದು ಜಿಲ್ಲಾಧಿಕಾರಿ ಕವಿತಾ ಮನ್ನಿಕೇರಿ ತಿಳಿಸಿದ್ದಾರೆ. ಈ ಕುರಿತು ಪ್ರಕಟಣೆ ನೀಡಿರುವ ಅವರು, ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನಲ್ಲಿ ಶೇಂಗಾ ಮತ್ತು ಸೂರ್ಯಕಾಂತಿ **ಉತ್ಪನ್ನ** ಖರೀದಿಸುವ ಸಂಬಂಧ, ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನಲ್ಲಿ, ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಎಫ್‌ಎಕ್ಯೂ ಗುಣಮಟ್ಟದ ಶೇಂಗಾವನ್ನು ಪ್ರತಿ ಕ್ವಿಂಟಾಲ್‌ಗೆ 7263 ಹಾಗೂ ಸೂರ್ಯಕಾಂತಿಗೆ 7721

ರೂಪಾಯಿಗಳನ್ನು ನಿಗದಿಪಡಿಸಲಾಗಿದೆ ಜಿಲ್ಲೆಯ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘ, ವಿವಿಧ ತಾಲೂಕುಗಳಲ್ಲಿ ಖರೀದಿ ಕೇಂದ್ರಗಳನ್ನು ತೆರೆಯಲಾಗಿದೆ ಎಂದು ಜಿಲ್ಲಾಧಿಕಾರಿ ಮಾಹಿತಿ ನೀಡಿದ್ದಾರೆ.

*******

**ಅನಾರೋಗ್ಯದಿಂದ ಬಳಲುತ್ತಿದ್ದ** ಮಾಜಿ ಸಚಿವ ಶಾಸಕ ಹೆಚ್.ವೈ.ಮೇಟಿ ನಿನ್ನೆ ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು. ಪಾರ್ಥಿವ ಶರೀರದ ಅಂತ್ಯಕ್ರಿಯೆ ಇಂದು ಅವರ ಹುಟ್ಟೂರಾದ ಬಾಗಲಕೋಟೆ ಜಿಲ್ಲೆ ತಿಮ್ಮಾಪುರದಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ನಡೆಯಲಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಹಲವು ಗಣ್ಯರು ಅಂತ್ಯ ಸಂಸ್ಕಾರದಲ್ಲಿ ಪಾಲ್ಗೊಳ್ಳಲಿದ್ದಾರೆ.

*******

## ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

**ಕಬ್ಬು ಬೆಲೆನಿಗದಿಗೆ ಆಗ್ರಹಿಸಿ** ರಾಜ್ಯದ ವಿವಿಧೆಡೆ ಮುಂದುವರಿದ ರೈತರ ಹೋರಾಟ: ಸಮಸ್ಯೆ ನಿವಾರಣೆಗೆ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗೆ ಸೂಚನೆ.

**ರೈತರ ಸಮಸ್ಯೆಗಳನ್ನು ಬಗೆಹರಿಸುವಲ್ಲಿ** ರಾಜ್ಯ ಸರ್ಕಾರ ಸಂಪೂರ್ಣ ವಿಫಲ–ವಿಧಾನ ಪರಿಷತ್ ವಿಪಕ್ಷ ನಾಯಕರ ಆರೋಪ.

**ಚಿತ್ರದುರ್ಗ ಜಿಲ್ಲೆಯ** ಹಿರಿಯೂರು ಸ್ಥಾವರ ಅಭಿವೃದ್ಧಿಗೆ ಕಿರ್ಲೋಸ್ಕರ್ ಫೆರಸ್ ಇಂಡಸ್ಟ್ರಿಸ್‌ನಿಂದ 3 ಸಾವಿರ ಕೋಟಿ ರೂಪಾಯಿ ಹೂಡಿಕೆ.

**ಸರ್ಕಾರದ ಮಹತ್ವಾಕಾಂಕ್ಷಿ** ಇ–ಸ್ವತ್ತು ಯೋಜನೆ: ಸಮರ್ಪಕವಾಗಿ ಜಾರಿಗೆ ಜಿಲ್ಲಾ ಪಂಚಾಯತಿ ಸಿಇಓಗಳಿಗೆ ಸೂಚನೆ.

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ**

******END******